ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

1

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ　　ದಿನಾಂಕ : DATE 4/7/2020

# ಸಿಎಂ ನಿಧಿಯ ₹140 ಕೋಟಿ ಕೋವಿಡ್ ಚಿಕಿತ್ಸೆಗೆ ಬಳಕೆ



ಬೆಂಗಳೂರು: ಕೋವಿಡ್-19 ನಿಯಂತ್ರಿಸಲು ಮತ್ತು ಸೋಂಕಿತರಿಗೆ ಚಿಕಿತ್ಸೆ ನೀಡಲು ಸಾರ್ವಜನಿಕರು, ಸಂಘ-ಸಂಸ್ಥೆಗಳಿಂದ ಈವರೆಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿ ಮತ್ತು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಖಾತೆಗೆ ಸಂಗ್ರಹವಾಗಿರುವ 334.50 ಕೋಟಿ ರು.ಗಳು ದೇಣಿಗೆಯಲ್ಲಿ 140.72 ಕೋಟಿ ರು.ಗಳನ್ನು ಚಿಕಿತ್ಸೆ, ಉಪಕರಣಗಳ ಖರೀದಿಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ನೀಡಲಾಗಿದೆ ಎಂದು ರಾಜ್ಯ ಸರ್ಕಾರ ತಿಳಿಸಿದೆ. ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಶುಕ್ರವಾರ ಕೊರೋನಾ ನಿಯಂತ್ರಣ ಹಾಗೂ ಚಿಕಿತ್ಸೆ ನೀಡಲು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಸಂಗ್ರಹವಾಗಿರುವ ಮೊತ್ತ ಹಾಗೂ ಬಿಡುಗಡೆಯಾದ ಮೊತ್ತದ ವಿವರಗಳ ಬಗ್ಗೆ ಶ್ವೇತ ಪತ್ರ ಹೊರಡಿಸಬೇಕೆಂದು ಆಗ್ರಹಿಸಿದ ಬೆನ್ನಹಿಂದೆಯೇ.ಸರ್ಕಾರ ಈ ವಿವರಗಳನ್ನು ಬಿಡುಗಡೆ ಮಾಡಿದೆ. ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 299.50 ಕೋಟಿ ರು. ಮತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರದ ಖಾತೆಗೆ 35 ಕೋಟಿ ರು. ದೇಣಿಗೆ ಬಂದಿದೆ. ಈ ಹಣವನ್ನು ಕೋವಿಡ್-19 ನಿಯಂತ್ರಿಸಲು ಮತ್ತು ತುರ್ತು ಸೇವೆಗಳಿಗಾಗಿ ಉಪಯೋಗಿಸಲು ಆಪತ್ ನಿಧಿಯಾಗಿ ಕಾಯ್ದಿರಿಸಲಾಗಿದೆ. ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 109.10 ಕೋಟಿ ರು.ಗಳನ್ನು ಹಾಗೂ ಕೊರೋನಾ ನಿಯಂತ್ರಿಸುವ ಸಲುವಾಗಿ ಸಿಎಸ್ ಆರ್ ನಿಧಿಯಿಂದ ವಿಪತ್ತು ನಿರ್ವಹಣಾ ಪ್ರಾಧಿಕಾರಕ್ಕೆ ನೀಡಿದ ಮೊತ್ತದಲ್ಲಿ ವೆಂಟಿಲೇಟರ್ ಸೇರಿದಂತೆ ಇತ್ಯಾದಿ ಉಪಕರಣಗಳನ್ನು ಖರೀದಿಸಲು 31,62,66,220 ರು.ಗಳನ್ನು ನೀಡಲಾಗಿದೆ ಎಂದು ಸಿಎಂ ಕಾರ್ಯದರ್ಶಿ ಡಾ.ಎಸ್.ಸೆಲ್ವಕುಮಾರ್ ತಿಳಿಸಿದ್ದಾರೆ.